15

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಆರೋಗ್ಯ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 20/5/2020

# 16000 ಹಾಸಿಗೆಗಳಿಗೆ ಆಕ್ಸಿಜನ್ ವ್ಯವಸ್ಥೆ

## 207 ಕೋಟಿ ರು. ಮೊತ್ತದ ಯೋಜನೆಗೆ ರಾಜ್ಯ ಸರ್ಕಾರ ಅನುಮೋದನೆ

20/5/20

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದಲ್ಲಿ ಕೊರೋನಾ ವೈರಸ್ ಹಿನ್ನೆಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಮತ್ತು ತಾಲೂಕು ಆಸ್ಪತ್ರೆ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ 15,893 ಹಾಸಿಗೆಗಳಿಗೆ ಆಕ್ಸಿಜನ್ ವ್ಯವಸ್ಥೆ ಅಳವಡಿಕೆಗೆ 207.98 ಕೋಟಿ ರೂ. ಮೊತ್ತದ ಕಾಮಗಾರಿ ಕೈಗೊಳ್ಳಲು ಅನುಮೋದನೆ ನೀಡಲಾಗಿದೆ.

ಕೊರೋನಾ ರೋಗಿಗಳಿಗೆ ಅಗತ್ಯವಾದ ಆಕ್ಸಿಜನ್ ಸೌಲಭ್ಯದ ಸಾಮರ್ಥ್ಯ ಹೆಚ್ಚಿಸುವ ಅಗತ್ಯವಿದೆ. ಅಲ್ಲದೆ ವಿಶ್ವ ಆರೋಗ್ಯ ಸಂಸ್ಥೆ ಸಲಹೆಯಂತೆ ಕೊರೋನಾ ಸೋಂಕಿತರಲ್ಲಿ ತೀವ್ರವಾಗಿ ಬಳಲುತ್ತಿರುವ ಶೇ.75 ರೋಗಿಗಳಿಗೆ ಒಂದು ನಿಮಿಷಕ್ಕೆ 10 ಲೀ. ಮತ್ತು ಶೇ.25 ರೋಗಿಗಳಿಗೆ 30 ಲೀ. ಆಕ್ಸಿಜನ್ ಅಗತ್ಯವಿದೆ ಎಂದು ತಿಳಿಸಿದೆ. ಈ ನಿಟ್ಟಿನಲ್ಲಿ ಆಸ್ಪತ್ರೆಗಳಲ್ಲಿ ಕೊರೋನಾ ರೋಗಿಗಳಿಗೆ ಒದಗಿಸಲಿರುವ ಹಾಸಿಗೆಗಳಲ್ಲಿ ಶೇ.25 ಹಾಸಿಗೆಗಳಿಗೆ ಆಕ್ಸಿಜನ್ ವ್ಯವಸ್ಥೆ ಕಲ್ಪಿಸುವ ಅಗತ್ಯವಿದೆ.

ಈ ಸಂಬಂಧ ಜಿಲ್ಲಾ ಆಸ್ಪತ್ರೆಗಳ 125 ಹಾಸಿಗೆಗಳಿಗೆ ಎಲ್ಲ ತಾಲೂಕು ಆಸ್ಪತ್ರೆಗಳಲ್ಲಿ 50 ಹಾಸಿಗೆಗಳಿಗೆ ಹಾಗೂ 206 ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ 30 ಹಾಸಿಗೆಗಳಿಗೆ ವೈದ್ಯಕೀಯ ಗ್ಯಾಸ್ ಪೈಪ್‌ಲೈನ್‌ಗಳನ್ನು ಮೀಸಲಿಟ್ಟಿರುವ 15,893 ಹಾಸಿಗೆಗಳನ್ನು ಹೈಫ್ಲೋ ಆಕ್ಸಿಜನ್ ಸರಬರಾಜಿಗೆ ಉನ್ನತೀಕರಿಸಲು 79,150 ರೋಗಿಗಳ ನಿರ್ವಹಣೆ ಮಾಡಲು ಅನುವಾಗುವಂತೆ 209.58 ಕೋಟಿ ರೂ. ಅಂದಾಜು ವೆಚ್ಚ ಮಾಡಲಾಗಿದೆ.